ಶಾಸಕರ ನಿಧಿಯನ್ನು ಹೆಚ್ಚಿಸುವುದು

152 : (289)

ಶ್ರೀ ಕೆ. ರಾಜು (ರಾಮನಗರ)

ಅ) ಪ್ರಸ್ತುತವಿರುವ ಶಾಸಕರ ನಿಧಿ ರೂ. 1.00 ಕೋಟಿಯಿಂದ ರೂ. 3.00 ಕೋಟಿಗಳಿಗೆ ಹೆಚ್ಚಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ.

ಆ) ಹಾಗಿದ್ದಲ್ಲಿ, ಅನುದಾನ ಹೆಚ್ಚಿಸಲು ಸರ್ಕಾರ ಕ್ರಮ ಕೈಗೊಳ್ಳುವುದೇ (ಮಾಹಿತಿ ನೀಡುವುದು)

ಶ್ರೀ ಡಿ.ವಿ. ಸದಾನಂದ ಗೌಡ (ಮುಖ್ಯಮಂತ್ರಿಗಳು)

ಅ) ಪ್ರಸ್ತುತವಿರುವ ಶಾಸಕರ ಸ್ಥಳೀಯ ಪ್ರದೇಶಾಭಿವೃದ್ಧಿ ನಿಧಿಯನ್ನು ರೂ. 1.00 ಕೋಟಿಯಿಂದ ರೂ. 2.00 ಕೋಟಿಗೆ ಹೆಚ್ಚಿಸಲು ಕೆಲವು ಶಾಸಕರುಗಳಿಂದ ಪ್ರಸ್ತಾವನೆಗಳನ್ನು ಸ್ವೀಕರಿಸಲಾಗಿದೆ.

ಆ) ಪ್ರಸ್ತಾವನೆಯು ಸರ್ಕಾರದ ಪರಿಶೀಲನೆಯಲ್ಲಿದೆ.

ಅತಿಥಿ ಉಪನ್ಯಾಸಕರ ಸಮಸ್ಯೆಗಳು

107 : (205)

ಶ್ರೀ ಬೆಳ್ಳುಬ್ಬಿ ಸಂಗಪ್ಪ ಕಲ್ಲಪ್ಪ (ಬಸವನ ಬಾಗೇವಾಡಿ)

ಅ) ಕರ್ನಾಟಕದಲ್ಲಿ ಅತಿಥಿ ಉಪನ್ಯಾಸಕರ ಸಂಖ್ಯೆ ಎಷ್ಟು; ಅತಿಥಿ ಉಪನ್ಯಾಸಕರ ಸಮಸ್ಯೆಗಳ ಬಗ್ಗೆ ಸರ್ಕಾರದ ಗಮನಕ್ಕೆ ಬಂದಿದೆಯೇ; ಹಾಗಿದ್ದಲ್ಲಿ ಸಮಸ್ಯೆಗಳ ಪರಿಹಾರಕ್ಕೆ ಸರ್ಕಾರ ಕೈಗೊಂಡ ಕ್ರಮಗಳೇನು (ವಿವರ ನೀಡುವುದು)

ಆ) ರಾಜ್ಯದಲ್ಲಿರುವ ಅತಿಥಿ ಉಪನ್ಯಾಸಕರ ಸಂಖ್ಯೆ ಎಷ್ಟು; ಬಿಜಾಪುರ ಜಿಲ್ಲೆಯಲ್ಲಿರುವ ಒಟ್ಟು ಅತಿಥಿ ಉಪನ್ಯಾಸಕರ ಸಂಖ್ಯೆ ಎಷ್ಟು (ವಿವರ ನೀಡುವುದು)

ಇ) ಅತಿಥಿ ಉಪನ್ಯಾಸಕರನ್ನು ಖಾಯಂಗೊಳಿಸಲು ಸರ್ಕಾರವು ಕ್ರಮಕೈಗೊಳ್ಳುವುದೇ (ವಿವರ ನೀಡುವುದು) ?

ಶ್ರೀ ವಿಶ್ವೇಶ್ವರ ಹೆಗಡೆ ಕಾಗೇರಿ (ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು)

ಅ) ಕರ್ನಾಟಕದ ಸರ್ಕಾರಿ ಪದವಿ ಪೂರ್ವ ಕಾಲೇಜುಗಳಲ್ಲಿ ಅತಿಥಿ ಉಪನ್ಯಾಸಕರ ಸಂಖ್ಯೆ : 1495